ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 12–08–2021**

## ಮಾಧ್ಯಮ ಆಹ್ವಾನ

## Media Invitation

ಕಾರ್ಮಿಕ ಇಲಾಖೆಯ ಪ್ರಗತಿ ಹಾಗೂ ಕೋವಿಡ್ ವೇಳೆಯಲ್ಲಿ ಕೈಗೊಂಡ ಕ್ರಮಗಳು ಕುರಿತು

ಪತ್ರಿಕಾ ಗೋಷ್ಠಿ :
**ಅರಬೈಲ್ ಶಿವರಾಂ ಹೆಬ್ಬಾರ್, ಕಾರ್ಮಿಕ ಸಚಿವರು**

ದಿನಾಂಕ : 13–8–2021, ಶುಕ್ರವಾರ, ಸಮಯ : ಬೆಳಿಗ್ಗೆ 11.00 ಗಂಟೆಗೆ

ಸ್ಥಳ : ಕೊಠಡಿ ಸಂಖ್ಯೆ : 318, ವಿಕಾಸಸೌಧ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## PRESS RELEASE

**ಶಿಬಿರಾರ್ಥಿಗಳು ಉತ್ತಮ ತರಬೇತಿ ಪಡೆದು ಶಿಸ್ತಿನಿಂದ ಕರ್ತವ್ಯ ನಿರ್ವಹಿಸಿ : ಡಾ. ಅಮರ ಕುಮಾರ ಪಾಂಡೆ**

ಬೆಂಗಳೂರು ಆಗಸ್ಟ್ 12 (ಕರ್ನಾಟಕ ವಾರ್ತೆ) :

ಸಾರ್ವಜನಿಕ ಸೇವೆಯಲ್ಲಿ ಗೃಹರಕ್ಷಕರ ಪಾತ್ರ ಮಹತ್ವವಾಗಿರುವುದರಿಂದ ಶಿಬಿರಾರ್ಥಿಗಳು ತರಬೇತಿ ಅವಧಿಯಲ್ಲಿ ಉತ್ತಮ ತರಬೇತಿಯನ್ನು ಪಡೆದು, ಶಿಸ್ತಿನಿಂದ ಕರ್ತವ್ಯ ನಿರ್ವಹಿಸಬೇಕೆಂದು ಆರಕ್ಷಕ ಮಹಾ ನಿರ್ದೇಶಕರು, ಗೃಹರಕ್ಷಕದಳದ ಮಹಾ ಸಮಾದೇಷ್ಟರು, ಪೌರರಕ್ಷಣೆ ನಿರ್ದೇಶಕರು, ಅಗ್ನಿಶಾಮಕ ಹಾಗೂ ತುರ್ತು ಸೇವೆಗಳ ಮಹಾ ನಿರ್ದೇಶಕರಾದ ಡಾ. ಅಮರ ಕುಮಾರ ಪಾಂಡೆ ತಿಳಿಸಿದರು.

ಅವರು ಇತ್ತೀಚೆಗೆ ಗೃಹರಕ್ಷಕ ಹಾಗೂ ಪೌರರಕ್ಷಣಾ ಅಕಾಡೆಮಿಯಲ್ಲಿ ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಗೆ ಬೋಧಕ, ಸಹಾಯಕ ಬೋಧಕ ಹಾಗೂ ಸೈನಿಕಹುದ್ದೆಗಳಿಗೆ ಹೊಸದಾಗಿ ನೇಮಕಗೊಂಡ 45 ಜನ ಪ್ರಶಿಕ್ಷಣಾರ್ಥಿಗಳಿಗೆ ಹಮ್ಮಿಕೊಂಡಿದ್ದ ಆರು ತಿಂಗಳ ಬುನಾದಿ ತರಬೇತಿ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಆರಕ್ಷಕ ಅಪರ ಮಹಾ ನಿರ್ದೇಶಕರಾದ ಸುನಿಲ್ ಅಗ್ರವಾಲ್, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಆರಕ್ಷಕ ಉಪನಿರೀಕ್ಷಕ ಕೆ.ಟಿ. ಬಾಲಕೃಷ್ಣ, ಆರಕ್ಷಕ ಉಪ ನಿರೀಕ್ಷಕರು, ಹಾಗೂ ಉಪ ಮಹಾ ಸಮಾದೇಷ್ಟರು, ಗೃಹರಕ್ಷಕದಳ ಹಾಗೂ ಉಪ ನಿರ್ದೇಶಕರು ಪೌರರಕ್ಷಣೆ ಶ್ರೀಮತಿ ರೇಣುಕಾ ಕೆ. ಸುಕುಮಾರ್, ಇವರು ಉಪಸ್ಥಿತರಿದ್ದರು.

**ಆಗಸ್ಟ್ 14 ರಂದು ರಾಜ್ಯಾದ್ಯಂತ ಮೆಗಾ ಲೋಕ್ ಅದಾಲತ್**

ಬೆಂಗಳೂರು ಆಗಸ್ಟ್ 12 (ಕರ್ನಾಟಕ ವಾರ್ತೆ) :

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರ ವತಿಯಿಂದ ರಾಜ್ಯಾದ್ಯಂತ ಆಗಸ್ಟ್ 14 ರಂದು ಇ-ಲೋಕ್ ಅದಾಲತ್-ಮೆಗಾ ಲೋಕ್ ಅದಾಲತ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ತಕ್ಷಣ ಪರಿಹಾರ ಪಡೆದುಕೊಳ್ಳಬಹುದು. ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಪೂರ್ಣವಾಗಿ ಮರುಪಾವತಿಸಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜೀ ಮಾಡಿಕೊಳ್ಳಬಹುದು.

ಕಡಿಮೆ ಖರ್ಚಿನಲ್ಲಿ ಶೀಘ್ರವಾಗಿ ಇತ್ಯರ್ಥವಾಗುವ ಈ ಕಾರ್ಯಕ್ರಮದ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳುವಂತೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಟೋಲ್ ಫ್ರೀ ಸಂಖ್ಯೆ: 1800-425-90900 ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹೆಚ್.ಶಶಿಧರ ಶೆಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ ಪುಸ್ತಕ ಉದ್ಘಾಟನೆ**

ಬೆಂಗಳೂರು ಆಗಸ್ಟ್ 12 (ಕರ್ನಾಟಕ ವಾರ್ತೆ) :

ಗ್ರಂಥಪಾಲಕರ ದಿನಾಚರಣೆ 2021ರ ಅಂಗವಾಗಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವ ಬಿ.ಸಿ. ನಾಗೇಶ ಅವರು ಕಬ್ಬನ್ ಉದ್ಯಾನವನ ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ ಪುಸ್ತಕ ಪ್ರದರ್ಶನವನ್ನು ಉದ್ಘಾಟಿಸಿ, ಭಾರತೀಯ ಗ್ರಂಥಾಲಯ ವಿಜ್ಞಾನ ಪಿತಾಮಹಾರಾದ ಡಾ.ಎಸ್.ಆರ್ ರಂಗನಾಥನ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಡಾ. ಪಿ.ವೈ ರಾಜೇಂದ್ರ ಕುಮಾರ್, ನಿವೃತ್ತ ನಿರ್ದೇಶಕರು, ನ್ಯಾಷನಲ್ ಲೈಬ್ರರಿ, ಕೋಲ್ಕತ್ತಾ ಹಾಗೂ ಖ್ಯಾತ ಸಾಹಿತಿಗಳು ಮತ್ತು ಚಿಂತಕರಾದ ಶೂದ್ರ ಶ್ರೀನಿವಾಸ್, ಸಾರ್ವಜನಿಕ ಗ್ರಂಥಾಲಯದ ನಿರ್ದೇಶಕರಾದ ಡಾ. ಸತೀಶ್‌ಕುಮಾರ್ ಎಸ್. ಹೊಸಮನಿ ಇತರೆ ಗಣ್ಯರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

**ಛಾಯಾಚಿತ್ರ ಲಗತ್ತಿಸಿದೆ)**

**ವಸತಿ ಸಚಿವರ ಪ್ರವಾಸ**

ಬೆಂಗಳೂರು ಆಗಸ್ಟ್ 12 (ಕರ್ನಾಟಕ ವಾರ್ತೆ) :

ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ವಿ. ಸೋಮಣ್ಣ ಅವರು ಆಗಸ್ಟ್ 14 ಹಾಗೂ 15 ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು ಎಂದು ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ನಗರಾಭಿವೃದ್ಧಿ ಸಚಿವರ ಪ್ರವಾಸ**

ಬೆಂಗಳೂರು ಆಗಸ್ಟ್ 12 (ಕರ್ನಾಟಕ ವಾರ್ತೆ) :

ನಗರಾಭಿವೃದ್ಧಿ ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಬಿ.ಎ. ಬಸವರಾಜು (ಬೈರತಿ) ಅವರು ಆಗಸ್ಟ್ 14 ಹಾಗೂ 15 ರಂದು ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ವಾಪಸ್ಸಾಗಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಶಾಸಕರ ಅನುದಾನ ಬಿಡುಗಡೆ ಕುರಿತು ವಿಧಾನ ಪರಿಷತ್ ಸಭಾಪತಿ
ಬಸವರಾಜ ಹೊರಟ್ಟಿಯವರ ನೇತೃತ್ವದಲ್ಲಿ ಸಮಿತಿಯ ಮಹತ್ವದ ಸಭೆ.

ಬೆಂಗಳೂರು ಆಗಸ್ಟ್ 12 (ಕರ್ನಾಟಕ ವಾರ್ತೆ) :

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಬಿಡುಗಡೆಗೊಂಡಿರುವ ಅನುದಾನ ಬಿಡುಗಡೆ ಕುರಿತು ವಿಧಾನ ಪರಿಷತ್ತಿನ ಐದು ಜನ ಸದಸ್ಯರ ಸಮಿತಿ ಸಭೆ ಸಭಾಪತಿ ಬಸವರಾಜ ಹೊರಟ್ಟಿಯವರ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆಯಲಿದೆ. ಕಳೆದ ವಾರ ಬೆಂಗಳೂರಿನಲ್ಲಿ ನಡೆದ ವಿಧಾನ ಪರಿಷತ್ತಿನ ಎಲ್ಲಾ ಸದಸ್ಯರ ಸಭೆಯಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಅನುದಾನ ಬಿಡುಗಡೆಯಲ್ಲಿ ವಿಳಂಬವಾಗುತ್ತಿದೆ ಎಂಬುದಾಗಿ ಬಹುತೇಕ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದ್ದರು. ಈ ಕುರಿತು ಸರಕಾರದ ಮಟ್ಟದಲ್ಲಿ ಕ್ರಮ ಕೈಕೊಳ್ಳುವಂತೆ ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಯೋಜನಾ ಮತ್ತು ಸಾಂಖ್ಯಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯೂ ಸೇರಿದಂತೆ ವಿವಿಧ ಅಧಿಕಾರಿಗಳಿಗೆ ಸಭಾಪತಿ ಬಸವರಾಜ ಹೊರಟ್ಟಿಯವರು ಸಭೆಯಲ್ಲಿ ಸೂಚನೆ ನೀಡಿದ್ದರು ಹಾಗೂ ಅಗಸ್ಟ್ 14 ರೊಳಗಾಗಿ ಶಾಸಕರಿಗೆ ಅನುದಾನ ಬಿಡಗಡೆ ಕುರಿತಂತೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭಾಪತಿಗಳು ಎಲ್ಲ ಸದಸ್ಯರಿಗೆ ಭರವಸೆ ನೀಡಿದ್ದರು.

ಅನುದಾನ ಬಿಡುಗಡೆಗೆ ಆಡಳಿತಾತ್ಮಕ ಅಡ್ಡಿ ಆತಂಕಗಳು ಸೇರಿದಂತೆ ವಿವಿಧ ಸಮಸ್ಯೆಗಳ ಬಗ್ಗೆ ಸಮಗ್ರ ಅಧ್ಯಯನ ನಡೆಸಿ ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡಿಕೊಡುವ ನಿಟ್ಟಿನಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ಐದು ಜನ ವಿವಿಧ ಪಕ್ಷಗಳ ಹಿರಿಯ ಸದಸ್ಯರಾದ ಕೆ.ಸಿ.ಕೊಂಡಯ್ಯ, ಎಸ್.ರವಿ, ಡಾ|| ತೇಜಸ್ವಿನಿ ಗೌಡ, ನಿರಾಣಿ ಹಣಮಂತ ರುದ್ರಪ್ಪ, ಅಪ್ಪಾಜಿಗೌಡ ಅವರನ್ನೊಳಗೊಂಡ ಸಮಿತಿ ನೇಮಿಸಲಾಗಿದೆ.

ಈ ಸಭೆಯಲ್ಲಿ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಗೆ ಶೇಕಡ 75 ರಷ್ಟು ಅನುದಾನ ವೆಚ್ಚವಾಗಬೇಕು ಎಂಬ ಶರತ್ತುಗಳಿಂದ ವಿನಾಯತಿ ನೀಡುವುದು, ಪ್ರತಿ ವರ್ಷ ಜೂನ ಮಾಹೆಯ ಅಂತ್ಯದವರೆಗಿನ ಕಡ್ಡಾಯವಾಗಿ ಎಲ್ಲಾ ಶಾಸಕರು ರೂ. 2.00 ಕೋಟಿಗಳ ಕಾಮಗಾರಿಗಳನ್ನು ನೀಡುವ ಬಗ್ಗೆ, ಎಸ್.ಸಿ.ಪಿ./ಟಿ.ಎಸ್.ಪಿ. ಅನುದಾನವನ್ನು ಕಡ್ಡಾಯವಾಗಿ ಖರ್ಚು ಮಾಡುವ ಕುರಿತಂತೆ ಇನ್ನೂ ಹಲವು ವಿಷಯಗಳ ಬಗ್ಗೆ ಸವಿಸ್ತಾರ ಚರ್ಚೆ ನಡೆಯಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.